ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 20/11/20

# ಜಗಕೆ ತಂತ್ರ ನೆರವು

## ಬೆಂಗಳೂರು ಟೆಕ್ ಸಮಿಟ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ ಮಾತು

## ದತ್ತಾಂಶ, ಸೈಬರ್ ಸುರಕ್ಷತೆಗೆ ಯುವ ತಂತ್ರಜ್ಞರ ಕೊಡುಗೆ ಇರಲಿ

ಬೆಂಗಳೂರು: ಭಾರತದ ದತ್ತಾಂಶ ರಕ್ಷಣೆ, ಸೈಬರ್ ಸುರಕ್ಷತೆಯಲ್ಲಿ ಯುವ ತಂತ್ರಜ್ಞರು ಪ್ರಮುಖ ಪಾತ್ರವಹಿಸಬೇಕು ಮತ್ತು ಇದಕ್ಕಾಗಿ ಸೂಕ್ತ ಡಿಜಿಟಲ್ ಉತ್ಪನ್ನಗಳನ್ನು ಅಭಿವೃದ್ಧಿಪಡಿಸಬೇಕು ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಜತೆಗೆ ಭಾರತದಲ್ಲಿ ಅಭಿವೃದ್ಧಿಪಡಿಸುವ ತಂತ್ರಜ್ಞಾನದ ಪರಿಹಾರಗಳನ್ನು ಜಗತ್ತಿಗೆ ತಲುಪಿಸಲು ಇದು ಸಕಾಲ ಎಂದು ಅವರು ಹೇಳಿದ್ದಾರೆ.

ಬಹುನಿರೀಕ್ಷಿತ ವಿಶ್ವದ ಅತಿದೊಡ್ಡ ವರ್ಚ್ಯುವಲ್ ಸಮಿಟ್ ಎನ್ನಲಾದ ಬೆಂಗಳೂರು ಟೆಕ್ ಸಮಿಟ್ -2020ಕ್ಕೆ ವರ್ಚ್ಯುವಲ್ ವ್ಯವಸ್ಥೆಯ ಮೂಲಕ ನವದೆಹಲಿಯಿಂದಲೇ ಗುರುವಾರ ಉದ್ಘಾಟಿಸಿ ಮಾತನಾಡಿದ ಅವರು, 'ರಕ್ಷಣಾ ಕ್ಷೇತ್ರದ ಅಭಿವೃದ್ಧಿ ಹಾಗೂ ಮರು ವಿನ್ಯಾಸಕ್ಕೆ ತಂತ್ರಜ್ಞಾನ ವೇಗ ನೀಡುತ್ತಿದೆ. ತಂತ್ರಜ್ಞಾನ ಬಳಕೆಯನ್ನು ಹೆಚ್ಚಿಸುತ್ತಿರುವುದರಿಂದ ಡೇಟಾ ಸಂರಕ್ಷಣೆ ಮತ್ತು ಸೈಬರ್ ಸುರಕ್ಷತೆ ಕಾಪಾಡಿಕೊಳ್ಳಬಹುದಾಗಿದೆ. ಸೈಬರ್ ದಾಳಿ ಮತ್ತು ವೈರಸ್‌ಗಳ ವಿರುದ್ಧ ಡಿಜಿಟಲ್ ಉಪಕ್ರಮಗಳನ್ನು ಪರಿಣಾಮಕಾರಿಯಾಗಿ ಬಳಸುವ ಸೈಬರ್ ಭದ್ರತಾ ಪರಿಹಾರಗಳನ್ನು ಯುವ ತಂತ್ರಜ್ಞರು ರೂಪಿಸಲು ಪ್ರಮುಖ ಪಾತ್ರ ವಹಿಸಬೇಕು' ಎಂದು ಕರೆ ನೀಡಿದ್ದಾರೆ.

ಭಾರತ ಮಾಹಿತಿ ಯುಗದಲ್ಲಿ ಮುಂದೆ ಸಾಗಲು ಬೇಕಾದ ಎಲ್ಲ ವೈಶಿಷ್ಟ್ಯಗಳನ್ನು ಹೊಂದಿದೆ. ಸ್ಥಳೀಯ ತಂತ್ರಜ್ಞಾನಗಳು ಜಾಗತಿಕ ಮಟ್ಟಕ್ಕೇರುವ ಸಾಮರ್ಥ್ಯವನ್ನು ಹೊಂದಿದೆ. ಭಾರತದಲ್ಲಿ ವಿನ್ಯಾಸಗೊಳಿಸಲಾದ ತಂತ್ರಜ್ಞಾನದ ಪರಿಹಾರವನ್ನು ಜಗತ್ತಿಗೆ ನೀಡುವ ಸಮಯ ಬಂದಿದೆ. ತಂತ್ರಜ್ಞಾನವೂ ಪ್ರತಿಯೊಬ್ಬರ ಜೀವನಕ್ರಮವಾಗಿ ಬದಲಾಗಿದೆ. ನಾವೀನ್ಯತೆಯೂ ಪ್ರಗತಿಗೆ ಅತಿ ಪ್ರಮುಖವಾಗಿದೆ. ಜೈವಿಕ ವಿಜ್ಞಾನ, ಎಂಜಿನಿಯರಿಂಗ್ ಮುಂತಾದ ವಿಜ್ಞಾನ ಕ್ಷೇತ್ರಗಳಲ್ಲಿ ನಾವೀನ್ಯತೆಯ ವ್ಯಾಪ್ತಿ ಮತ್ತು ಅವಶ್ಯಕತೆ ಹೆಚ್ಚಿದೆ ಎಂದು ಪ್ರಧಾನಿ ಇದೇ ಸಂದರ್ಭದಲ್ಲಿ ಹೇಳಿದರು.

ಸರ್ಕಾರವು ಡಿಜಿಟಲ್ ಮತ್ತು ತಂತ್ರಜ್ಞಾನಗಳ ಮಾರುಕಟ್ಟೆಯನ್ನು ಸೃಷ್ಟಿಸುವ ಜತೆಗೆ ಅದರ ಪ್ರಯೋಜನವನ್ನು ಪ್ರತಿಯೊಬ್ಬರು ಪಡೆಯುವಂತೆ ಮಾಡುತ್ತಿದೆ. ತಂತ್ರಜ್ಞಾನದ ಮೂಲಕ ಕೋಟ್ಯಂತರ ರೈತರು ಒಂದೇ ಕ್ಲಿಕ್‌ನಲ್ಲಿ ಹಣಕಾಸು ನೆರವು ಪಡೆಯುತ್ತಿದ್ದಾರೆ. ವಿಶ್ವದ ಅತಿದೊಡ್ಡ ಆರೋಗ್ಯ ಯೋಜನೆಯಾದ ಆಯುಷ್ಮಾನ್ ಭಾರತ್ ಯಶಸ್ವಿಯಾಗಿ ನಿರ್ವಹಣೆಯಾಗುತ್ತಿದೆ. ಲಾಕ್‌ಡೌನ್ ಸಂದರ್ಭದಲ್ಲಿಯೂ ತಂತ್ರಜ್ಞಾನದಿಂದ ಬಡವರಿಗೆ ಸೂಕ್ತ ಮತ್ತು ತ್ವರಿತ ಸೇವೆ ನೀಡಲು ಸಾಧ್ಯವಾಗಿದೆ. ತಂತ್ರಜ್ಞಾನದಿಂದ ನಾವು ಎಲ್ಲರಿಗೂ ಮನೆ, ವಿದ್ಯುತ್ ಒದಗಿಸುವ ಜತೆಗೆ ಟೋಲ್ ಬೂತ್‌ಗಳನ್ನು ವೇಗವಾಗಿ ದಾಟುತ್ತಿದ್ದೇವೆ. ಕೊರೊನಾಕ್ಕೆ ಲಸಿಕೆ ಬಂದ ನಂತರ ತಂತ್ರಜ್ಞಾನದ ಸಹಾಯದೊಂದಿಗೆ ಕಡಿಮೆ ಅವಧಿಯಲ್ಲಿ ಹೆಚ್ಚು ಜನರಿಗೆ ಲಸಿಕೆ ಒದಗಿಸುವ ವಿಶ್ವಾಸ ಹೊಂದಿದ್ದೇವೆ ಎಂದರು.

ಸೋಂಕಿನ ಸಮಯದಲ್ಲಿ ತಂತ್ರಜ್ಞಾನ ಕ್ಷೇತ್ರವು ತನ್ನ ಸಾಮರ್ಥ್ಯ ಸಾಬೀತುಪಡಿಸಿದೆ. ಒಂದು ದಶಕದಲ್ಲಿ ಆಗಿರದ ತಂತ್ರಜ್ಞಾನದ ಅಳವಡಿಕೆಯು ಕೆಲವೇ ತಿಂಗಳುಗಳಲ್ಲಿ ಈಡೇರಿದೆ. ಶಿಕ್ಷಣ, ಆರೋಗ್ಯ, ಶಾಪಿಂಗ್ ಇತ್ಯಾದಿ ಕ್ಷೇತ್ರಗಳಲ್ಲಿ ತಂತ್ರಜ್ಞಾನ ವ್ಯಾಪಕ ಅಳವಡಿಕೆಯಾಗಿದೆ. ಕೊರೊನಾ ಕಾಲದಲ್ಲಿ ನಾವು ನೋಡಿದ್ದು ರಸ್ತೆಯ ತಿರುವು ಮಾತ್ರ, ಅದು ಕೊನೆಯಲ್ಲ, ಬಹಳ ಮುಂದೆ ಸಾಗುವ ಅಗತ್ಯವಿದೆ ಎಂದು ಹೇಳಿದರು.

**ಮಾಹಿತಿ ಯುಗದ ಮಧ್ಯದಲ್ಲಿದ್ದೇವೆ:** ಕೈಗಾರಿಕಾ ಯುಗದ ಸಾಧನೆಗಳು ಮುಗಿದಿವೆ, ನಾವೀಗ ಮಾಹಿತಿ ಯುಗದ ಮಧ್ಯದಲ್ಲಿದ್ದೇವೆ. ಕೈಗಾರಿಕಾ ಯುಗದ ಬದಲಾವಣೆ ಒಂದೇ ದಿಕ್ಕಿನಲ್ಲಿದ್ದವು. ಮಾಹಿತಿ ಯುಗದಲ್ಲಿ ಬದಲಾವಣೆಯಲ್ಲಿ ಹಲವು ಆಯಾಮಗಳಿವೆ ಎಂದರು.









ಬೆಂಗಳೂರು ಟೆಕ್ ಸಮಿಟ್‌ನಲ್ಲಿ ಭಾಗವಹಿಸಿದ ಪ್ರಧಾನಿ ನರೇಂದ್ರ ಮೋದಿ, ಉಪಮುಖ್ಯಮಂತ್ರಿ, ಉನ್ನತ ಶಿಕ್ಷಣ ಸಚಿವ ಡಾ.ಸಿ.ಎನ್.ಅಶ್ವತ್ಥ ನಾರಾಯಣ, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ.

### ಪ್ರಧಾನಿ ಮಾತಿನ ಮುಖ್ಯಾಂಶ

- ಡಿಜಿಟಲ್ ಮತ್ತು ತಂತ್ರಜ್ಞಾನ ಮಾರುಕಟ್ಟೆ ಸೃಷ್ಟಿ ಜತೆಗೆ ಕೋಟ್ಯಂತರ ರೈತರು ಒಂದೇ ಕ್ಲಿಕ್‌ನಲ್ಲಿ ವಿತ್ತೀಯ ನೆರವು ಪಡೆಯುತ್ತಿದ್ದಾರೆ.
- ತಂತ್ರಜ್ಞಾನದಿಂದ 'ಆಯುಷ್ಮಾನ್ ಭಾರತ್' ಯಶಸ್ವಿಯಾಗಿ ನಿರ್ವಹಣೆ.
- ಮಾಹಿತಿ ಯುಗದ ಮಧ್ಯಭಾಗದಲ್ಲಿ ಉತ್ತಮ ರೀತಿ ಕಾರ್ಯನಿರ್ವಹಣೆಯೇ ಅತ್ಯಂತ ಪ್ರಧಾನ ಅಂಶ.
- ಅವಕಾಶಗಳನ್ನೇ ತಂತ್ರಜ್ಞಾನ ರೂಪದಲ್ಲಿ ಸಾಕಾರಗೊಳಿಸಿಕೊಳ್ಳಬೇಕು.
- 25 ವರ್ಷಗಳ ಹಿಂದೆ ಪದಾರ್ಪಣೆ ಮಾಡಿದ್ದ ಇಂಟರ್‌ನೆಟ್‌ಗೆ ದೇಶದಲ್ಲೀಗ 75 ಕೋಟಿ ಸಂಪರ್ಕ.
- ನಾಲ್ಕು ವರ್ಷಗಳ ಅವಧಿಯಲ್ಲಿ ಶೇ.50ಕ್ಕೂ ಹೆಚ್ಚು ಅಂತರ್ಜಾಲ ಕನೆಕ್ಷನ್‌ಗಳ ವೃದ್ಧಿ.
- ರೈತರಿಗೆ ಡ್ರೋನ್‌ನಿಂದ ಭೂದಾಖಲೆ ನೀಡಲು ಕ್ರಮ.

### 60 ಲಕ್ಷ ಉದ್ಯೋಗ: ಯಡಿಯೂರಪ್ಪ

ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮಾತನಾಡಿ, ಕರ್ನಾಟಕವೂ ಹೂಡಿಕೆದಾರರ ಅತಿ ಆಕರ್ಷಣೀಯ ತಾಣವಾಗಿದೆ. ಅದರಲ್ಲೂ ಹೈ-ಎಂಡ್ ತಂತ್ರಜ್ಞಾನಗಳ ಹೂಡಿಕೆಗೆ ಇನ್ನಷ್ಟು ಉತ್ತೇಜನ ನೀಡುತ್ತಿದ್ದೇವೆ. ಐಟಿ ನೀತಿಯನ್ನು ಜಾರಿಗೆ ತಂದಿದ್ದೇವೆ ಮತ್ತು ಬೆಂಗಳೂರಿನ ಹೊರ ಜಿಲ್ಲೆಗಳಲ್ಲಿ ಐಟಿ ಕಂಪನಿಗಳ ಅಭಿವೃದ್ಧಿಗೆ ಕ್ರಮ ವಹಿಸುತ್ತಿದ್ದೇವೆ. ಈ ಮೂಲಕ ಮುಂದಿನ 5 ವರ್ಷದಲ್ಲಿ 60 ಲಕ್ಷ ನೇರ ಅಥವಾ ಪರೋಕ್ಷ ಉದ್ಯೋಗ ಸೃಷ್ಟಿಸುವ ಗುರಿ ಹೊಂದಿದ್ದೇವೆ ಎಂದು ವಿವರಿಸಿದರು. ಕರ್ನಾಟಕವೂ ನವೋದ್ಯಮಿಗಳಿಗೆ ಪೂರಕವಾದ ಎಲ್ಲ ರೀತಿಯ ವಾತಾವರಣ ಸೃಷ್ಟಿ ಮಾಡಿದೆ. ರಾಜ್ಯ ಸರ್ಕಾರ ಉದ್ಯಮಿ ಸ್ನೇಹಿ ವಾತಾವರಣ ನಿರ್ಮಿಸಲು ಎಲ್ಲ ರೀತಿಯ ಕ್ರಮ ತೆಗೆದುಕೊಂಡಿದೆ. ಹೂಡಿಕೆದಾರರಿಗೆ ಉತ್ತೇಜನ ನೀಡಲು ಮತ್ತು ತಾಂತ್ರಿಕತೆಯ ಅಭಿವೃದ್ಧಿ ದೃಷ್ಟಿಯಿಂದ ಕಾರ್ಮಿಕ ಮತ್ತು ಭೂ ಸುಧಾರಣಾ ಕಾಯ್ದೆಗೆ ತಿದ್ದುಪಡಿ ತಂದಿದ್ದೇವೆ. ಕರ್ನಾಟಕ ಆರ್ಥಿಕ ತಂತ್ರಜ್ಞಾನ ಮಿಷನ್, ಕರ್ನಾಟಕ ಆವಿಷ್ಕಾರ ಪ್ರಾಧಿಕಾರಗಳ ರಚನೆ ಮಾಡಿದ್ದೇವೆ ಎಂದರು. ಎರಡು ದಶಕಗಳಿಂದ ಜೈವಿಕ ತಂತ್ರಜ್ಞಾನದ ಅಭಿವೃದ್ಧಿ ಕ್ಷೇತ್ರದಲ್ಲಿ ಕರ್ನಾಟಕವೂ ದೇಶದಲ್ಲೇ ಮೊದಲಿದೆ. 2025ರ ಅವಧಿಯಲ್ಲಿ 100 ಬಿಲಿಯನ್ ಯುಎಸ್ ಡಾಲರ್ ರಾಷ್ಟ್ರೀಯ ಜೈವಿಕ ಆರ್ಥಿಕತೆಯ ಗುರಿಯ ಶೇ.50ರಷ್ಟು ಮಾರುಕಟ್ಟೆ ಷೇರನ್ನು ಕರ್ನಾಟಕ ಹೊಂದಬೇಕು ಎನ್ನುವ ನಿಟ್ಟಿನಲ್ಲಿ ಹಲವು ಕ್ರಮಗಳನ್ನು ತೆಗೆದುಕೊಂಡಿದ್ದೇವೆ ಎಂದು ಹೇಳಿದರು.

### 300 ಶತಕೋಟಿ ಡಾಲರ್ ಆರ್ಥಿಕತೆ ಗುರಿ

ಉಪಮುಖ್ಯಮಂತ್ರಿಯೂ ಆದ ಐಟಿ ಬಿಟಿ ಸಚಿವ ಡಾ.ಸಿ.ಎನ್.ಅಶ್ವತ್ಥನಾರಾಯಣ ಮಾತನಾಡಿ, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಡಿಜಿಟಲ್ ಇಂಡಿಯಾ ಹಾಗೂ ಆತ್ಮನಿರ್ಭರ ಭಾರತ್ ಪರಿಕಲ್ಪನೆ ಹಿನ್ನೆಲೆ ಕರ್ನಾಟಕವು ಅಭಿವೃದ್ಧಿಯಲ್ಲಿ ದಾಪುಗಾಲು ಇಡುತ್ತಿದ್ದು, ಮುಂದಿನ ಐದು ವರ್ಷಗಳಲ್ಲಿ 300 ಶತಕೋಟಿ ಡಾಲರ್ ಡಿಜಿಟಲ್ ಆರ್ಥಿಕತೆಯ ಗುರಿ ಸಾಧಿಸಲಾಗುವುದು. ಸದ್ಯಕ್ಕೆ 52 ಶತಕೋಟಿ ಡಾಲರ್‌ನಷ್ಟು ಡಿಜಿಟಲ್ ಆರ್ಥಿಕತೆಯ ಗುರಿಯನ್ನು ರಾಜ್ಯವು ದಾಟಿದೆ. ಮುಂದಿನ ಐದು ವರ್ಷಗಳಲ್ಲಿ ಈ ನಿಟ್ಟಿನಲ್ಲಿ ಹಾಕಿಕೊಂಡಿರುವ ಗುರಿಯನ್ನು ಮುಟ್ಟಲು ಎಲ್ಲ ರೀತಿಯ ಕ್ರಮಗಳನ್ನು ಸರ್ಕಾರ ತೆಗೆದುಕೊಳ್ಳಲಿದೆ ಎಂದರು. ಪ್ರಧಾನಮಂತ್ರಿ ಮೋದಿ ಅವರು ನಿಗದಿಪಡಿಸಿರುವ ಒಂದು ಟ್ರಿಲಿಯನ್ ಡಿಜಿಟಲ್ ಆರ್ಥಿಕತೆಯ ಗುರಿಗೆ ಹೆಚ್ಚಿನ ಕೊಡುಗೆ ನೀಡಲು ಕರ್ನಾಟಕ ಸನ್ನದ್ಧವಾಗಿದೆ. ಈ ನಿಟ್ಟಿನಲ್ಲಿ ಅಗತ್ಯ ಸುಧಾರಣೆಗಳನ್ನು ಕೈಗೊಂಡು ಐಟಿ-ಬಿಟಿ ಸೇರಿದಂತೆ ಸರ್ವ ಕ್ಷೇತ್ರಗಳಲ್ಲೂ ಸುಧಾರಣೆಗಳನ್ನು ತರಲಾಗಿದೆ. ನಿಗದಿತ ಗುರಿಯನ್ನು ತಪ್ಪದೇ ಮುಟ್ಟುತ್ತೇವೆ ಎಂದರು.